ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯ
**Karnataka State Rural Development and Panchayat Raj University**

ರೈತ ಭವನ, ಜನರಲ್‌ಕಾರ್ಯಪ್ಪ ವೃತ್ತ, ಗದಗ– 582 101
RaithaBhavana, General Cariappa Circle, Gadag – 582 101
E-mail: ksrdpruadmissions@gmail.com Phone: 08372-230338, Fax: 08372-297343

News about University Published in Prajavani Kannada News paper regarding Govt.School Adoption published date:11.01.2020

ಇಂಗ್ಲಿಷ್, ಗಣಿತ, ವಿಜ್ಞಾನ ವಿಷಯಗಳನ್ನು ಕಲಿಸಲು ಒತ್ತು

# ಗ್ರಾಮಗಳತ್ತ ಗ್ರಾಮೀಣಾಭಿವೃದ್ಧಿ ವಿ.ವಿ

• ಕೆ.ಎಂ.ಸತೀಶ್ ಬೆಳ್ಳಕ್ಕಿ

**ಗದಗ:** ಸರ್ಕಾರದ ಶಾಲೆ ದತ್ತು ಯೋಜನೆಯನ್ನು ಇಲ್ಲಿನ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ 'ಗ್ರಾಮೀಣ ಪ್ರದೇಶದತ್ತ ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯ' ಎಂಬ ಪರಿಕಲ್ಪನೆಗೆ ಒಗ್ಗಿಸಿಕೊಂಡು ಜಿಲ್ಲೆಯ ಶೈಕ್ಷಣಿಕ ಗುಣಮಟ್ಟ ಸುಧಾರಣೆಗೆ ಒತ್ತು ನೀಡಿದೆ. ರಾಜ್ಯದಲ್ಲಿ ಹೆಚ್ಚು ಶಾಲೆಗಳನ್ನು ದತ್ತು ಪಡೆದ ವಿಶ್ವವಿದ್ಯಾಲಯ ಎಂಬ ಹಿರಿಮೆಗೂ ಪಾತ್ರವಾಗಿದೆ.

ಶಾಲೆಗಳ ಸಮಗ್ರ ಅಭಿವೃದ್ಧಿಗೆ ಕುಲಸಚಿವ ಪ್ರೊ.ಬಿ.ಎಲ್.ಲಕ್ಕಣ್ಣನವರ ಅಧ್ಯಕ್ಷತೆಯಲ್ಲಿ ಸಂಚಾಲನ ಸಮಿತಿಯನ್ನು ವಿಶ್ವವಿದ್ಯಾಲಯ ರಚಿಸಿದೆ. ಗದಗ, ರೋಣ ಮತ್ತು ಶಿರಹಟ್ಟಿ ತಾಲ್ಲೂಕಿನ 11 ಗ್ರಾಮಗಳ 20 ಸರ್ಕಾರಿ ಶಾಲೆಗಳನ್ನು ದತ್ತು ಪಡೆದಿದೆ. ಜಿಲ್ಲೆಯ ಎಸ್ಸೆಸ್ಸೆಲ್ಸಿ ಫಲಿತಾಂಶ ಕುಸಿತಕ್ಕೆ ಕಾರಣವಾಗಿರುವ ಅಂಶಗಳನ್ನು ಗುರುತಿಸಿ, ಅವುಗಳನ್ನು ಸುಧಾರಿಸಲು ಡಿಡಿಪಿಐ ಹಾಗೂ ಬಿಇಒಗಳ ಸಭೆ ನಡೆಸಿ ಸಮಗ್ರ ಯೋಜನೆ ರೂಪಿಸಲು ಸಿದ್ಧತೆ ನಡೆಸಿದೆ.

'ಶೈಕ್ಷಣಿಕ ಸಲಹೆಗಾರ ಪ್ರೊ.ಎಂ.ಆರ್.ದೊರೆಸ್ವಾಮಿ ಅವರ ಜತೆಗಿನ 20 ವರ್ಷಗಳ ಒಡನಾಟ ಶಾಲೆ ದತ್ತು ಯೋಜನೆ ಬಗ್ಗೆ ವಿಶೇಷ ಆಸಕ್ತಿ ಮೂಡಿಸಿತು. ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆ ಆಗುತ್ತಿದೆ. ಅರ್ಹ ಶಿಕ್ಷಕರು ಇರುವುದು ಸರ್ಕಾರಿ ಶಾಲೆಗಳಲ್ಲೇ. ಈ ಯೋಜನೆಯನ್ನು ವಿಶ್ವವಿದ್ಯಾಲಯದ ಸಾಮಾಜಿಕ ಜವಾಬ್ದಾರಿಯಾಗಿ ಪರಿಗಣಿಸಿ ಜಿಲ್ಲೆಯ ಶೈಕ್ಷಣಿಕ ಪರಿಸ್ಥಿತಿ ಸುಧಾರಣೆಯತ್ತ ಒಂದು ಪುಟ್ಟ ಹೆಜ್ಜೆ ಇರಿಸಿದ್ದೇವೆ' ಎನ್ನುತ್ತಾರೆ ಕುಲಪತಿ ಪ್ರೊ.ವಿಷ್ಣುಕಾಂತ ಎಸ್.ಚಟಪಲ್ಲಿ ಹೇಳಿದರು.

'ದತ್ತು ಪಡೆದಿರುವ ಶಾಲೆಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿ ಪಡಿಸುವುದರ ಜತೆಗೆ ಮೂಲಸೌಕರ್ಯ ಅಭಿವೃದ್ಧಿ ಹಾಗೂ ಶಿಕ್ಷಕರಿಗೆ ತರಬೇತಿ ಯೋಜನೆ ಹಾಕಿಕೊಳ್ಳಲಾಗಿದೆ. ಮೊದಲ ಹಂತದಲ್ಲಿ ಸರ್ಕಾರಿ ಶಾಲೆಗಳ ಮೂಲ ಅವಶ್ಯಕತೆಗಳು ಏನು ಎಂಬ ಸಮೀಕ್ಷೆ ನಡೆಸಿದ್ದು, ಅವುಗಳನ್ನು ಸರ್ಕಾರದ ಯೋಜನೆಗಳ ಮೂಲಕವೇ ಅನುಷ್ಠಾನಗೊಳಿಸಲಾಗುವುದು' ಎಂದು ಅವರು ಹೇಳಿದರು.

'ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯ ಗ್ರಾಮೀಣ ಜನರ ಬದುಕಿಗೆ ಹೆಚ್ಚು ಹತ್ತಿರವಾಗಿರುವುದರಿಂದ ಹಳ್ಳಿ ಮಕ್ಕಳ ಶೈಕ್ಷಣಿಕ ಮಟ್ಟ ಸುಧಾರಿಸಿ ಅವರ ಶೈಕ್ಷಣಿಕ, ವೃತ್ತಿ ಬದುಕಿಗೆ ಸಂಬಂಧಿಸಿದ ಮಾರ್ಗದರ್ಶನ ನೀಡಲಾಗುವುದು' ಎಂದು ಕುಲಸಚಿವ ಪ್ರೊ.ಲಕ್ಕಣ್ಣನವರ ತಿಳಿಸಿದರು.

ವಿಶ್ವವಿದ್ಯಾಲಯದ ನೂತನ ಆವರಣದಲ್ಲಿ 'ಸಾಬರಮತಿ ಆಶ್ರಮ' ಇದ್ದು, ದತ್ತು ಪಡೆದ ಶಾಲೆ ಮಕ್ಕಳನ್ನು ಅಲ್ಲಿಗೆ ಕರೆತಂದು ಅವರಿಗೆ ಮೌಲ್ಯಶಿಕ್ಷಣ ಹಾಗೂ ಗಾಂಧಿ ವಿಚಾರಧಾರೆಗಳನ್ನು ಪರಿಚಯಿಸುವ ಉದ್ದೇಶ ಇದೆ ಎಂದು ಹೇಳುತ್ತಾರೆ.

## ಮಾನಸಿಕ ಸಮಸ್ಯೆಗೆ ಆಪ್ತ ಸಮಾಲೋಚನೆ

'ಗ್ರಾಮೀಣ ವಿದ್ಯಾರ್ಥಿಗಳು ಗಣಿತ, ವಿಜ್ಞಾನ ಹಾಗೂ ಇಂಗ್ಲಿಷ್ ವಿಷಯದ ಕಲಿಕೆಯಲ್ಲಿ ಹಿಂದುಳಿದಿರುತ್ತಾರೆ. ಈ ಮೂರೂ ವಿಷಯಗಳ ಬಗ್ಗೆ ಹೆಚ್ಚಿನ ಗಮನಹರಿಸಿ ಮಕ್ಕಳ ಓದಿಗೆ ನೆರವಾಗುವ ಉದ್ದೇಶವಿದೆ. ಆಪ್ತ ಸಮಾಲೋಚನೆ ನಡೆಸಿ ಮಕ್ಕಳು ಮತ್ತು ಶಿಕ್ಷಕರ ಮಾನಸಿಕ ಸಮಸ್ಯೆಗಳಿಗೆ ಪರಿಹಾರ ದೊರಕಿಸಿ ಕೊಡಲಾಗುವುದು' ಎಂದು ಪ್ರೊ. ಲಕ್ಕಣ್ಣನವರ ತಿಳಿಸಿದರು.



ರಾಜ್ಯದಲ್ಲಿ ಅತಿಹೆಚ್ಚು ಶಾಲೆಗಳನ್ನು ದತ್ತು ತೆಗೆದುಕೊಂಡಿರುವ ವಿ.ವಿ ಗದುಗಿನ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿ.ವಿ. ಜಿಲ್ಲೆಯ ಶೈಕ್ಷಣಿಕ ಸುಧಾರಣೆಗೆ ಹೆಜ್ಜೆ ಇರಿಸಿದ್ದೇವೆ

**ಪ್ರೊ. ವಿಷ್ಣುಕಾಂತ ಎಸ್.ಚಟಪಲ್ಲಿ**
ಕುಲಪತಿ



ವಿಶ್ವವಿದ್ಯಾಲಯದ ಉದ್ದೇಶಕ್ಕೆ ಅನುಗುಣವಾದ ಪರಿಕಲ್ಪನೆ ಇದು. ಶಾಲೆ ದತ್ತು ಯೋಜನೆಯೊಂದಿಗೆ ವಿಶ್ವವಿದ್ಯಾಲಯವನ್ನೇ ಗ್ರಾಮೀಣ ಪ್ರದೇಶದತ್ತ ಒಯ್ಯುವ ಉದ್ದೇಶವಿದೆ.

**ಪ್ರೊ. ಬಿ.ಎಲ್.ಲಕ್ಕಣ್ಣನವರ,**
ಕುಲಸಚಿವ